**Akashvani : Bangalore**
**Regional Bulletin In Kannada**
**26.06.2026 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**26.06.2026 / 18.40 hrs**

**<><*<><>*><>**

ಮುಖ್ಯಾಂಶಗಳು

೧. ತೆರಿಗೆ ಸೋರಿಕೆ ತಡೆಗೆ ವಾಣಿಜ್ಯ ಇಲಾಖೆ ಅಧಿಕಾರಿಗಳಿಗೆ ಮುಖ್ಯಮಂತ್ರಿ ಸೂಚನೆ ; ಅಬಕಾರಿ ಇಲಾಖೆಯಲ್ಲಿ ೫೭೪ ಸನ್ನದುಗಳನ್ನು ಇ-ಹರಾಜು ಹಾಕಲು ನಿರ್ಧಾರ

೨. ರಾಜ್ಯದಲ್ಲಿ ೭೨ ಸಾವಿರ ಹುದ್ದೆಗಳ ನೇಮಕಾತಿಗೆ ಸರ್ಕಾರ ತೀರ್ಮಾನ ; ಇಬ್ಬರು ಅಧಿಕಾರಿಗಳ ನೇಮಕ

೩. ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ನಾಳೆಯಿಂದ ರಾಜ್ಯ ಪ್ರವಾಸ ; ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಕೆಂಪೇಗೌಡ ಜಯಂತಿಯಲ್ಲಿ ಭಾಗಿ

೪. ಬಿಡದಿ ಟೌನ್‌ಶಿಪ್ ವಿರುದ್ಧ ಬಿಜೆಪಿ ಹೋರಾಟ ನಡೆಸಲು ನಿರ್ಧಾರ ; ನಾಳೆ ಬೆಂಗಳೂರಿನಲ್ಲಿ ಅಧಿಕೃತ ಘೋಷಣೆ

೫. ಇದೇ ೩೦ ರಿಂದ ಕರಾವಳಿ ಹಾಗೂ ಮಲೆನಾಡಿನಲ್ಲಿ ಮಳೆಯ ಪ್ರಮಾಣ ಏರಿಕೆ ಸಾಧ್ಯತೆ ; ಹವಾಮಾನ ಇಲಾಖೆ ಮುನ್ಸೂಚನೆ

**<><*<><>*><>**

ಯಾವುದೇ ಸರಕು ಸಾಗಾಣೆ ವಾಹನವು ಅಗತ್ಯ ದಾಖಲೆಗಳಿಲ್ಲದೇ ಚೆಕ್‌ಪೋಸ್ಟ್ ಅಥವಾ ರಾಜ್ಯದ ಗಡಿಯನ್ನು ದಾಟಬಾರದು ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೂಚಿಸಿದ್ದಾರೆ. ಬೆಂಗಳೂರಿನಲ್ಲಿಂದು ನಡೆದ ವಾಣಿಜ್ಯ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಅಧಿಕಾರಿಗಳು ತೆರಿಗೆ ಸೋರಿಕೆಗೆ ಅವಕಾಶ ನೀಡಬಾರದು. ಪ್ರಾಮಾಣಿಕ ತೆರಿಗೆದಾರರಿಗೆ ಯಾವುದೇ ರೀತಿಯ ತೊಂದರೆ ನೀಡದಂತೆ ಸೂಚನೆ ನೀಡಿದ್ದಾರೆ. ಜಿಎಸ್‌ಟಿ ಸಂಗ್ರಹದಲ್ಲಿ ಶೇಕಡ ೯ ರಷ್ಟು ಪ್ರಗತಿಯಾಗಿದ್ದು, ರಾಜ್ಯ ದೇಶದಲ್ಲೇ ೨ನೇ ಸ್ಥಾನದಲ್ಲಿದ್ದು, ಗುಜರಾತ್, ತಮಿಳುನಾಡು, ಹರಿಯಾಣ ರಾಜ್ಯಗಳಿಗಿಂತ ಹೆಚ್ಚು ಪ್ರಗತಿ ಹೊಂದಿರುವುದು ಸಂತಸ ತಂದಿದೆ ಎಂದು ತಿಳಿಸಿದ್ದಾರೆ. ಬಳಿಕ ನಡೆದ ಅಬಕಾರಿ ಇಲಾಖೆಯ ಪ್ರಗತಿ ಪರಿಶೀಲನೆಯಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಪರವಾನಗಿ ನವೀಕರಣ ಮೊತ್ತವನ್ನು ೨ ಕಂತುಗಳಲ್ಲಿ ಪಾವತಿಸಲು ಅವಕಾಶ ಕಲ್ಪಿಸುವಂತೆ ತಿಳಿಸಿದ್ದಾರೆ. ಹೊಸದಾಗಿ ೫೭೪ ಸನ್ನದುಗಳನ್ನು ಇ-ಹರಾಜು ಹಾಕಲು ನಿರ್ಧರಿಸಲಾಗಿದೆ. ಅಧಿಕಾರಿಗಳು

ಸರ್ಕಾರದ ಘನತೆ ಉಳಿಸುವ ವೃತ್ತಿಪರತೆ ಪ್ರದರ್ಶಿಸುವಂತೆ ಸಲಹೆ ನೀಡಿದ ಮುಖ್ಯಮಂತ್ರಿ ಇಲ್ಲವಾದರೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

<><*<><>*><>

ರಾಜ್ಯದಲ್ಲಿ ೭೨ ಸಾವಿರ ಹುದ್ದೆಗಳ ನೇಮಕಾತಿಗೆ ಸರ್ಕಾರ ಮುಂದಾಗಿದೆ. ಈ ಕುರಿತಂತೆ ಬೆಂಗಳೂರಿನಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್, ಚುನಾವಣೆ ಪ್ರಣಾಳಿಕೆಯಲ್ಲಿ ಹೇಳಿದಂತೆ ಖಾಲಿಯಿರುವ ಹುದ್ದೆಗಳ ಭರ್ತಿ ಅನೇಕ ಕಾರಣಗಳಿಂದ ವಿಳಂಬವಾಗಿತ್ತು. ಅದರಲ್ಲೂ ಒಳಮೀಸಲಾತಿ ದೊಡ್ಡ ಸಮಸ್ಯೆಯಾಗಿತ್ತು. ಇದೀಗ ೭೨ ಸಾವಿರ ಹುದ್ದೆಗಳ ನೇಮಕ ಸಂಬಂಧ ತೀರ್ಮಾನಿಸಲಾಗಿದ್ದು, ಇಬ್ಬರು ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ ಎಂದು ತಿಳಿಸಿದ್ದಾರೆ. ಇದೇ ವೇಳೆ ಬಿಡದಿ ಟೌನ್‌ಶಿಪ್ ವಿಚಾರದಲ್ಲಿ ರೈತರನ್ನು ಒಕ್ಕಲೆಬ್ಬಿಸುವ ವಿಚಾರವೇ ಇಲ್ಲ ಎಂದು ತಿಳಿಸಿದ್ದಾರೆ. ರೈತರನ್ನು ಒಕ್ಕಲೆಬ್ಬಿಸಿ ಟೌನ್‌ಶಿಪ್ ನಿರ್ಮಾಣ ಮಾಡುವುದರಲ್ಲಿ ಯಾವುದೇ ಅರ್ಥವಿಲ್ಲ ಎಂದು ಹೇಳಿದ್ದಾರೆ.

ಬೆಂಗಳೂರಿನ ಮೇಲೆ ಸಂಚಾರದಟ್ಟಣೆ ಸೇರಿದಂತೆ ಅನೇಕ ಒತ್ತಡವಿದೆ. ನೈಸ್ ಯೋಜನೆ ಸಂದರ್ಭದಲ್ಲಿ ಬೆಂಗಳೂರು ಸುತ್ತಮುತ್ತ ೭ ಟೌನ್‌ಶಿಪ್ ಮಾಡಬೇಕು ಎಂಬ ಪ್ರಸ್ತಾವನೆ ಇತ್ತು. ಬಿಡದಿ ಟೌನ್‌ಶಿಪ್ ಆದರೆ ಸಂಚಾರ ದಟ್ಟಣೆ ಸ್ವಲ್ಪ ಸುಧಾರಿಸಬಹುದು ಎಂದು ಉಪಮುಖ್ಯಮಂತ್ರಿ ಆಶಾಭಾವನೆ ವ್ಯಕ್ತಪಡಿಸಿದ್ದಾರೆ.

<><*<><>*><>

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ನಾಳೆ ರಾಜ್ಯ ಪ್ರವಾಸ ಕೈಗೊಳ್ಳಲಿದ್ದು, ಬೆಂಗಳೂರು ನಗರ ವಿಶ್ವವಿದ್ಯಾನಿಲಯದಲ್ಲಿ ನಾಡಪ್ರಭು ಕೆಂಪೇಗೌಡ ಅವರ ೫೧೭ನೇ ಜಯಂತಿಯಲ್ಲಿ ಪಾಲ್ಗೊಳ್ಳಲಿದ್ದಾರೆ. ನಾಡಿದ್ದು, ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿರುವ ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯದ ೩೦ನೇ ಸಂಸ್ಥಾಪನಾ ದಿನಾಚರಣೆ ಹಾಗೂ ನಶಾಮುಕ್ತ ಭಾರತ ಕಾರ್ಯಕ್ರಮದಲ್ಲಿ ಉಪರಾಷ್ಟ್ರಪತಿಯವರು ಭಾಗವಹಿಸಲಿದ್ದಾರೆ.

<><*<><>*><>

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರೊಂದಿಗೆ ವ್ಯವಹಾರಿಕ ಸಂಬಂಧ ಇಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ತಿಳಿಸಿದ್ದಾರೆ. ಧರ್ಮಸ್ಥಳದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇತ್ತೀಚೆಗೆ ನಡೆದ ವಿಧಾನಪರಿಷತ್ ಚುನಾವಣೆ ವೇಳೆ ಆಗಿರುವ ಅಡ್ಡ ಮತದಾನದಿಂದ ನೋವುಂಟಾಗಿದೆ ಎಂದು ತಿಳಿಸಿದ್ದಾರೆ. ಬಿಡದಿ ಟೌನ್‌ಶಿಪ್ ಕುರಿತಂತೆ ಪ್ರತಿಕ್ರಿಯಿಸಿದ ಅವರು, ರೈತರನ್ನು ಯಾವುದೇ ಕಾರಣಕ್ಕೂ ಒಕ್ಕಲೆಬಿಸಲು ಬಿಡುವುದಿಲ್ಲ ಎಂದು ತಿಳಿಸಿದ್ದಾರೆ. ಬಿಡದಿ ಟೌನ್‌ಶಿಪ್ ವಿರುದ್ಧ ಬಿಜೆಪಿ ಹೋರಾಟ ನಡೆಸಲಿದ್ದು, ಈ ಬಗ್ಗೆ ನಾಳೆ ಬೆಂಗಳೂರಿನಲ್ಲಿ ಘೋಷಣೆ ಮಾಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ ’ಮನ್ ಕಿ ಬಾತ್’ನಲ್ಲಿ ಇದೇ ಭಾನುವಾರ ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ ಅವರು, ದೇಶ ವಿದೇಶಗಳಲ್ಲಿರುವ ಭಾರತೀಯರನ್ನುದ್ದೇಶಿಸಿ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್‌ನ ೧೨೬ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲಾ ವಾಹಿನಿಗಳು, ಆಕಾಶವಾಣಿ ಸುದ್ದಿ ಜಾಲತಾಣ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ.ಈ ಕಾರ್ಯಕ್ರಮವನ್ನು ಆಕಾಶವಾಣಿ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿಯೂ ನೇರ ಪ್ರಸಾರ ಮಾಡಲಾಗುತ್ತದೆ. ಹಿಂದಿ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮ ಬಿತ್ತರಗೊಳ್ಳಲಿದೆ.

<><*<><>*><>

ಬೆಂಗಳೂರಿನಲ್ಲಿ ಕಸದ ಸಮಸ್ಯೆ ಹೆಚ್ಚಿರುವ ಪ್ರದೇಶಗಳಿಗೆ ಸಂಜೆ ವೇಳೆಯಲ್ಲೂ ಆಟೋ ಟಿಪ್ಪರ್‌ಗಳನ್ನು ಕಳುಹಿಸುವಂತೆ ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ದಕ್ಷಿಣ ನಗರ ಪಾಲಿಕೆ ವ್ಯಾಪ್ತಿಯ ವಿವಿಧ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು, ಯಲಚೇನಹಳ್ಳಿ ಪ್ರದೇಶದಲ್ಲಿ ಈಗಾಗಲೇ ಸಂಜೆ ವೇಳೆಯಲ್ಲೂ ಕಸ ಸಂಗ್ರಹಣೆಗೆ ಆಟೋಗಳನ್ನು ನಿಯೋಜಿಸಲಾಗಿದೆ ಎಂದು ಹೇಳಿದ್ದಾರೆ. ಯಲಚೇನಹಳ್ಳಿ ಕೆರೆ ಸಮೀಪದ ಕಸ ವರ್ಗಾವಣೆ ಸ್ಥಳಕ್ಕೆ ಭೇಟಿ ನೀಡಿ ಮಾತನಾಡಿದ ಅವರು, ಈ ಪ್ರದೇಶದಲ್ಲಿ ರಸ್ತೆ ಬದಿಯಲ್ಲಿ ಕಸ ಬಿಸಾಡುವುದನ್ನು ಪರಿಣಾಮಕಾರಿಯಾಗಿ ತಡೆಯಬೇಕು ಎಂದು ಸೂಚಿಸಿದ್ದಾರೆ. ಕಸದ ಸಮಸ್ಯೆಗೆ ಶಾಶ್ವತ ಪರಿಹಾರ ದೊರಕಬೇಕಾದರೆ ಸಾರ್ವಜನಿಕರ ಸಹಕಾರ ಅತ್ಯಗತ್ಯ ಎಂದು ಹೇಳಿದ್ದಾರೆ. ಯಾರಾದರೂ ರಸ್ತೆ ಬದಿಯಲ್ಲಿ ಕಸ ಎಸೆಯುತ್ತಿರುವುದು ಕಂಡುಬಂದರೆ ತಕ್ಷಣ ಪಾಲಿಕೆ ಸಿಬ್ಬಂದಿಗೆ ಮಾಹಿತಿ ನೀಡಬೇಕು. ನಿಯಮ ಉಲ್ಲಂಘಿಸುವವರ ವಿರುದ್ಧ ದಂಡ ವಿಧಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ಬೆಂಗಳೂರಿನಲ್ಲಿ ನಾಳೆ ನಡೆಯುವ ಬಿಡಿಎ ಸಸಿ ನೆಡುವ ಕಾರ್ಯಕ್ರಮ ಹಾಗೂ ವಾಕಥಾನ್‌ನಲ್ಲಿ ಭಾಗವಹಿಸುವ ಸಾರ್ವಜನಿಕರ ಅನುಕೂಲಕ್ಕಾಗಿ ಬಿಎಂಆರ್‌ಸಿಎಲ್ ವಿಶೇಷ ಮೆಟ್ರೋ ಸೇವೆ ಪ್ರಕಟಿಸಿದೆ. ನಾಳೆ ಬೆಳಗ್ಗೆ ೪ ಗಂಟೆಯಿಂದ ನಗರದ ಎಲ್ಲಾ ಮೆಟ್ರೋ ಮಾರ್ಗಗಳಲ್ಲಿ ರೈಲು ಸಂಚಾರ ಆರಂಭವಾಗಲಿದೆ ಎಂದು ತಿಳಿಸಿದೆ. ಈ ಮೆಟ್ರೋ ಸೇವೆಯನ್ನು ಸದುಪಯೋಗ ಪಡಿಸಿಕೊಳ್ಳುವಲ್ಲಿ ಬಿಎಂಆರ್‌ಸಿಎಲ್ ಮನವಿ ಮಾಡಿದೆ.

<><*<><>*><>

ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ಚಿರಕನಹಳ್ಳಿ ಗ್ರಾಮದ ಹೊರವಲಯದಲ್ಲಿ ಅರಣ್ಯ ಇಲಾಖೆ ಅಳವಡಿಸಿದ್ದ ಬೋನಿನಲ್ಲಿ ಹುಲಿ ಸೆರೆಯಾಗಿದೆ. ಸೆರೆಸಿಕ್ಕ ಹೆಣ್ಣು ಹುಲಿ ೮-೧೦

ವರ್ಷದ್ದಾಗಿರಬಹುದು ಎಂದು ಅಂದಾಜಿಸಲಾಗಿದೆ. ಚಿರಕನಹಳ್ಳಿ, ಕುಂದಕೆರೆ, ಕಡಬೂರು ಸೇರಿ ಸುತ್ತಮುತ್ತಲಿನ ಗ್ರಾಮಗಳಲ್ಲಿ ಹುಲಿ ಸಂಚಾರ ಕಂಡುಬಂದ ಹಿನ್ನೆಲೆಯಲ್ಲಿ ಸಾರ್ವಜನಿಕರ ಸುರಕ್ಷತೆ ಗಮನದಲ್ಲಿಟ್ಟುಕೊಂಡು ಅರಣ್ಯ ಇಲಾಖೆ ಮುನ್ನೆಚ್ಚರಿಕೆ ಕ್ರಮವಾಗಿ ಬೋನನ್ನು ಅಳವಡಿಸಿತ್ತು. ಆಹಾರ ಅರಸಿ ಬಂದಿದ್ದ ಹುಲಿ ಬೋನಿಗೆ ಬಿದ್ದಿದೆ.

<><*<><>*><>

ಇದೇ ಭಾನುವಾರ ದೇಶಾದ್ಯಂತ ಪಲ್ಸ್ ಪೋಲಿಯೊ ಲಸಿಕಾ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಚಿಕ್ಕಬಳ್ಳಾಪುರ ಜಿಲ್ಲೆಯಾದ್ಯಂತ ಐದು ವರ್ಷದೊಳಗಿನ ಎಲ್ಲಾ ಮಕ್ಕಳಿಗೂ ಪಲ್ಸ್ ಪೋಲಿಯೊ ಲಸಿಕೆ ಹಾಕಲು ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದ್ದು, ಒಟ್ಟು ೧ ಲಕ್ಷದ ೨೩ ಸಾವಿರದ ೫೪೫ ಮಕ್ಕಳಿಗೆ ಲಸಿಕೆ ಹಾಕುವ ಗುರಿ ಹೊಂದಲಾಗಿದೆ ಎಂದು ಜಿಲ್ಲಾಧಿಕಾರಿ ಜಿ.ಪ್ರಭು ತಿಳಿಸಿದ್ದಾರೆ. ವಿಜಯನಗರ ಜಿಲ್ಲೆಯಲ್ಲಿ ರಾಷ್ಟ್ರೀಯ ಪಲ್ಸ್ ಪೋಲಿಯೋ ಜಾಗೃತಿ ಜಾಥಾಗೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಚಾಲನೆ ನೀಡಲಿದ್ದಾರೆ. ಜಾಥಾ ಮೂಲಕ ಸಾರ್ವಜನಿಕರಲ್ಲಿ ಪಲ್ಸ್ ಪೋಲಿಯೋ ಕುರಿತು ಅರಿವು ಮೂಡಿಸಲಾಗುವುದು ಎಂದು ಆರ್‌ಸಿಎಚ್ ಅಧಿಕಾರಿ ಡಾ. ಜಂಬಯ್ಯಾ ತಿಳಿಸಿದ್ದಾರೆ. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ೫ ವರ್ಷದೊಳಗಿನ ೧ ಲಕ್ಷದ ೪೦ ಸಾವಿರದ ೬೭೭ ಮಕ್ಕಳಿಗೆ ಪೋಲಿಯೋ ಹನಿ ಹಾಕಿಸುವ ಗುರಿ ಹೊಂದಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಕಾರಿ ಡಾ.ಎಚ್.ಆರ್.ತಿಮ್ಮಯ್ಯ ತಿಳಿಸಿದ್ದಾರೆ.

<><*<><>*><>

ಇನ್ನು ಹವಾವರ್ತಮಾನ,

ಕರಾವಳಿ ಜಿಲ್ಲೆಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗಿದೆ. ಕರಾವಳಿ ಜಿಲ್ಲೆಗಳಲ್ಲಿ ಇಂದಿನಿಂದ ಮೂರು ದಿನಗಳ ಕಾಲ ಕೆಲವೆಡೆ ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ನಿರ್ದೇಶಕ ಡಾ.ಸಿ.ಎಸ್.ಪಾಟೀಲ್ ತಿಳಿಸಿದ್ದಾರೆ. ಉತ್ತರ ಹಾಗೂ ದಕ್ಷಿಣ ಒಳನಾಡಿನ ಜಿಲ್ಲೆಗಳಲ್ಲಿ ಹಲವೆಡೆ ಹಗುರದಿಂದ ಸಾಧಾರಣವಾಗಿ ಮಳೆಯಾಗುವ ಸಾಧ್ಯತೆಯಿದೆ. ಇದೇ ೩೦ ರಿಂದ ರಾಜ್ಯದ ಕರಾವಳಿ ಹಾಗೂ ಮಲೆನಾಡಿನಲ್ಲಿ ಮಳೆಯ ಪ್ರಮಾಣ ಏರಿಕೆಯಾಗುವ ಹೆಚ್ಚಿನ ಸಾಧ್ಯತೆಯಿದೆ ಎಂದು ಮಾಹಿತಿ ನೀಡಿದ್ದಾರೆ.

<><*<><>*><>

ಇನ್ನು ಸಂಕ್ಷಿಪ್ತ ಸುದ್ದಿಗಳು...

೧. ಪ್ರವಾಹ ನಿಯಂತ್ರಣ ನಿಧಿಯಡಿ ಕೈಗೊಂಡ ಕಾರ್ಯಗಳು ಹಾಗೂ ಮಹಾನಗರ ಪಾಲಿಕೆ ವಿಜಯಪುರದಿಂದ ಕೈಗೊಂಡ ಹಲವು ಅಭಿವೃದ್ಧಿ ಕಾರ್ಯಗಳನ್ನು ಬೃಹತ್ ಹಾಗೂ ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವ ಎಂ.ಬಿ.ಪಾಟೀಲ್ ಪರಿಶೀಲಿಸಿದರು.

೨. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿವಿದೆಡೆಗಳಲ್ಲಿ ನಾಡಪ್ರಭು ಕೆಂಪೇಗೌಡರ ಜಯಂತಿ ಆಚರಣೆಗೆ ಸಿದ್ಧತೆಗಳು ನಡೆಯುತ್ತಿವೆ. ಜಯಂತಿ ಅಂಗವಾಗಿ ಕೆಂಪೇಗೌಡರ ಮೂಲಸ್ಥಳವಾದ ದೇವನಹಳ್ಳಿ ತಾಲೂಕಿನ ಆವತಿ ಗ್ರಾಮದಿಂದ ಕೆಂಪೇಗೌಡ ಜ್ಯೋತಿ ರಥಯಾತ್ರೆ ಹೊರಡಲು ಕಾರ್ಯಕ್ರಮ ಆಯೋಜಿಸಲಾಗಿದೆ.

೩. ಮೈಸೂರು ಜಿಲ್ಲೆ, ನಂಜನಗೂಡು ತಾಲ್ಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ವತಿಯಿಂದ ನಡೆದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ನಗರಾಭಿವೃದ್ಧಿ ಸಚಿವ ಡಾ.ಯತೀಂದ್ರ ಸಿದ್ದರಾಮಯ್ಯ ಉದ್ಘಾಟಿಸಿದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು<>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ ಆರಂಭವಾಗಲಿದೆ.<>*><>**